ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಐದನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 17ನೇ ಡಿಸೆಂಬರ್, 2014
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಉತ್ತರ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಗೆ ಸಂಬಂಧಿಸಿದಂತೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : **ಏಳನೇ ಪಟ್ಟಿ**

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : **ಏಳನೇ ಪಟ್ಟಿ**

3.ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು) ಅವರು:-

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್ 2013ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಕರ್ನಾಟಕ ಗೃಹಮಂಡಳಿಯಿಂದ ಭೂಸ್ವಾಧೀನ ಮತ್ತು ಅಭಿವೃದ್ಧಿ ಹಾಗೂ ನಿವೇಶನಗಳ/ಮನೆಗಳ/ಫ್ಲಾಟ್‌ಗಳ ಹಂಚಿಕೆಯ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ ವರದಿ(ಸಂಖ್ಯೆ-6)ಯನ್ನು ಮಂಡಿಸುವುದು.

4 . ವಿತ್ತೀಯ ಕಾರ್ಯಕಲಾಪಗಳು

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು) ಅವರು 2014-15ನೇ ಸಾಲಿನ ಪೂರಕ ಅಂದಾಜುಗಳನ್ನು (ಎರಡನೇ ಕಂತು) ಮಂಡಿಸುವುದು.

ಪು.ತಿ.ನೋ.,

5. ಶಾಸನ ರಚನೆ

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. **ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕ, 2014**
   ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ,ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಬಸವರಾಜ ಬೊಮ್ಮಾಯಿ, ಕೆ.ಜಿ.ಬೋಪಯ್ಯ, ಸಿ.ಟಿ.ರವಿ, ವಿ.ಸುನೀಲ್‌ಕುಮಾರ್ ಹಾಗೂ ಇತರರು ಪಶ್ಚಿಮ ಘಟ್ಟಗಳ ಸಂರಕ್ಷಣೆ ಕುರಿತು ಡಾ|| ಕಸ್ತೂರಿ ರಂಗನ್ ನೀಡಿರುವ ವರದಿ ಅನುಷ್ಠಾನದಿಂದಾಗಿ ಪಶ್ಚಿಮ ಘಟ್ಟಗಳಿಗೆ ಹೊಂದಿಕೊಂಡಿರುವ ಜಿಲ್ಲೆಗಳ ಜನರಿಗೆ ಅನ್ಯಾಯವಾಗದಂತೆ ಅವರನ್ನು ಒಕ್ಕಲೆಬ್ಬಿಸದಂತೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಚರ್ಚೆ.
2. ಶ್ರೀಯುತರುಗಳಾದ ಕೆ.ಎಂ.ಶಿವಲಿಂಗೇಗೌಡ, ವೈ.ಎನ್. ರುದ್ರೇಶ್‌ಗೌಡ ಮತ್ತು ಹೆಚ್.ಡಿ. ಕುಮಾರಸ್ವಾಮಿ ಅವರುಗಳು ರಾಜ್ಯದ ಬಹುಹಳ್ಳಿ ಕುಡಿಯುವ ನೀರಿನ ಡಿಬಿಒಟಿ ವ್ಯವಸ್ಥೆಯಲ್ಲಿ ಅರಸೀಕೆರೆ ತಾಲ್ಲೂಕಿನ 477 ಹಳ್ಳಿಗಳಿಗೆ ಟೆಂಡರ್ ಪ್ರಕ್ರಿಯೆ ಹಾಗೂ ಶಂಕು ಸ್ಥಾಪನೆ ಮುಗಿದಿದ್ದರೂ ಕಾರ್ಯರೂಪಕ್ಕೆ ಬಾರದಿರುವ ಬಗ್ಗೆ ಚರ್ಚೆ.
3. ಶ್ರೀಯುತರುಗಳಾದ ಕೆ.ಆರ್. ರಮೇಶಕುಮಾರ್,ಎಂ.ಕೃಷ್ಣಾರೆಡ್ಡಿ, ಡಾ|| ಕೆ.ಸುಧಾಕರ ಹಾಗೂ ಇತರರು ಕೋಲಾರ, ಬೆಂಗಳೂರು ಗ್ರಾಮಾಂತರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಪ್ರಸ್ತುತ ತಲೆದೋರಿರುವ ಕುಡಿಯುವ ನೀರಿನ ಅಭಾವದ ಬಗ್ಗೆ ಚರ್ಚೆ.
4. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ವೈ.ಎಸ್.ವಿ. ದತ್ತಾ, ಹೆಚ್.ಡಿ.ರೇವಣ್ಣ, ಎನ್.ಚಲುವರಾಯಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಹಾಗೂ ಇತರರು ಮರಳು ಗಣಿಗಾರಿಕೆ ಕಾಯ್ದೆ ರಾಜ್ಯದಲ್ಲಿ ಜಾರಿಯಲ್ಲಿದ್ದರೂ ಸಹ ಅಕ್ರಮ ಮರಳು ಗಣಿಗಾರಿಕೆ ಅವ್ಯಾಹತವಾಗಿ ನಡೆಯುತ್ತಿರುವುದರಿಂದ ರಾಜ್ಯದ ಬೊಕ್ಕಸಕ್ಕೆ ಕೋಟ್ಯಾಂತರ ರೂ.ಗಳ ನಷ್ಟವಾಗುತ್ತಿರುವ ಬಗ್ಗೆ ಚರ್ಚೆ.

   ಮತ್ತು

   ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಆರ್. ಅಶೋಕ್, ಬಸವರಾಜ ಬೊಮ್ಮಾಯಿ, ಗೋವಿಂದ ಎಂ.ಕಾರಜೋಳ, ಎಸ್. ಸುರೇಶಕುಮಾರ್, ಸಿ.ಟಿ.ರವಿ, ಹಾಗೂ ಇತರರು ರಾಜ್ಯದಲ್ಲಿ ಅಕ್ರಮ ಮರಳು ಗಣಿಗಾರಿಕೆ ಹೆಚ್ಚಾಗಿದ್ದು ಇದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟಾಗುತ್ತಿರುವ ಹಾಗೂ ಕೆರೆಗಳು ಬತ್ತಿ ಹೋಗುತ್ತಿರುವ ಬಗ್ಗೆ ಚರ್ಚೆ.

5. ಶ್ರೀಯುತರುಗಳಾದ ಬಿ. ಸುರೇಶ್‌ಗೌಡ, ಪಿ.ಎಂ. ಸುಧಾಕರಲಾಲ್ ಮತ್ತು ಎಸ್.ಆರ್. ವಿಶ್ವನಾಥ ಹಾಗೂ ಇತರರು ತುಮಕೂರು ಮಹಾನಗರ ಪಾಲಿಕೆಯ ತುಮಕೂರು ತಾಲ್ಲೂಕಿನ ಬಳ್ಳಾರಿ ಹೋಬಳಿಯ ಅಜ್ಜಗೊಂಡಹಳ್ಳಿ ಗ್ರಾಮದ ಸರ್ವೆ ನಂಬರ 56/2, 57,59,60,63/1 ಜಮೀನುಗಳಲ್ಲಿ ಕಾನೂನು ಮತ್ತು ನಿಯಾಮವಳಿ ಉಲ್ಲಂಘಿಸಿ ಕಸ ಸಂಗ್ರಹಣೆ ಮಾಡಲು ಪ್ರಾರಂಭಿಸಿರುವ ಬಗ್ಗೆ ಚರ್ಚೆ.

7. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಹೆಚ್.ಡಿ. ರೇವಣ್ಣ ಅವರು ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕು ದಂಡಿಗನಹಳ್ಳಿ ಹೋಬಳಿ ಕಾಚೇನಹಳ್ಳಿ ಏತ ನೀರಾವರಿ ಯೋಜನೆಯು ಕುಂಠಿತಗೊಂಡಿರುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.
2. ಶ್ರೀ ಎನ್. ಚಲುವರಾಯಸ್ವಾಮಿ ಅವರು ಬೆಂಗಳೂರು-ಮಂಗಳೂರು ರಾಷ್ಟ್ರೀಯ ಹೆದ್ದಾರಿ 48ರಲ್ಲಿ ನಾಗಮಂಗಲ ತಾಲ್ಲೂಕಿನ ಕದಬಹಳ್ಳಿ ಬಳಿ ಅಂಡರ್‌ಪಾಸ್ ಮತ್ತು ಸರ್ವೀಸ್ ರಸ್ತೆ ನಿರ್ಮಿಸುವ ಬಗ್ಗೆ ಹಾಗೂ ಬೆಳ್ಳೂರು ಕ್ರಾಸ್ ನಂತರ ಟೋಲ್ ಪ್ಲಾಜಾವನ್ನು ನಿರ್ಮಿಸುವುದರ ಬಗ್ಗೆ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.
3. ಶ್ರೀ ಬಿ.ಬಿ. ನಿಂಗಯ್ಯ ಅವರು ಮೂಡಿಗೆರೆ ತಾಲ್ಲೂಕು, ಬಣಕಲ್ ಹೋಬಳಿಯ ಹೆಚ್.ಕೆ.ಜಿ ರಸ್ತೆಯು ಮಳೆಗಾಲದಲ್ಲಿ ಹರಿದುಹೋಗುವ ಭಾರಿ ನೀರಿನಿಂದಾಗಿ ಕುಸಿದಿರುವ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.
4. ಶ್ರೀ ಕೆ.ಆರ್. ರಮೇಶ್‌ಕುಮಾರ್ ಅವರು ಖಾಸಗಿ ಅನುದಾನಿತ ಪದವಿಪೂರ್ವ ಕಾಲೇಜುಗಳ ಜೆ.ಓ.ಸಿ ಕೋರ್ಸ್‌ಗಳಲ್ಲಿ ಕೃಷಿ ವಿಷಯಕ್ಕೆ ಸಂಬಂಧಿಸಿದ ಕೋರ್ಸ್‌ಗಳಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿರುವ ಬಿ.ಎಸ್‌ಸಿ., (ಕೃಷಿ) ಹಾಗೂ ಬಿ.ಎಸ್‌ಸಿ., (ಕೃಷಿ ಮಾರುಕಟ್ಟೆ) ಪದವೀಧರರಿಗೆ ವಿದ್ಯಾರ್ಹತೆಗೆ ತಕ್ಕಂತೆ ಸೂಕ್ತ ಹುದ್ದೆಗಳನ್ನು ನೇಮಕಾತಿ ಮಾಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.
5. ಶ್ರೀ ಅರಬೈಲ್ ಶಿವರಾಂ ಹೆಬ್ಬಾರ್ ಅವರು ಹಾಲಕ್ಕಿಗೌಡ, ಕರಿಜಾಲುಗೌಡ, ಕುಣಬಿ ಮತ್ತು ದನಗಾರಗೌಳಿ ಸಮುದಾಯಗಳನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸುವ ಬಗ್ಗೆ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.
6. ಶ್ರೀ ಕೆ.ಜಿ. ಬೋಪಯ್ಯ ಅವರು ಕೊಡಗು ಜಿಲ್ಲಾ ಪಂಚಾಯತಿಯಲ್ಲಿ ಖಾಲಿಯಿರುವ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳ ಮತ್ತು ಇತರೆ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.
7. ಶ್ರೀ ಸಂಜಯ ಬಿ. ಪಾಟೀಲ್ ಅವರು ಎರಡು ವರ್ಷಗಳ ಹಿಂದೆ ಬೆಳಗಾವಿ ತಾಲ್ಲೂಕಿನ ಸುಮಾರು ಹತ್ತು ಹಳ್ಳಿಗಳಲ್ಲಿ ಭೂಮಿ ಮರುಮಾಪನೆಯಾಗಿದ್ದು, ರೈತರಿಗೆ ಉತಾರ ವಿತರಿಸದಿರುವ ಹಾಗೂ ಹದ್ದು-ಬಸ್ತಿ ಗುರುತಿಸಿಕೊಡುವ ಬಗ್ಗೆ ಕಂದಾಯ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

8. ಶ್ರೀ ಕೆ.ಬಿ. ಪ್ರಸನ್ನಕುಮಾರ್ ಅವರು ಶಿವಮೊಗ್ಗ ನಗರ ವಿಮಾನ ನಿಲ್ದಾಣ ಕಾಮಗಾರಿಯು ನಿಂತು ಹೋಗಿರುವ ಬಗ್ಗೆ ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.
9. ಶ್ರೀ ಕೆ.ಬಿ. ಕೋಳಿವಾಡ್ ಅವರು ರಾಣಿಬೆನ್ನೂರು ನಗರ ಸಭೆ ಆಸ್ತಿಯನ್ನು ನೆಹರು ಮಾರ್ಕೆಟ್ ಸಂಘದವರಿಗೆ ಕಲ್ಯಾಣ ಮಂಟಪ ಕಟ್ಟಲು ನೀಡಿದ್ದು, ಕರಾರಿನ ಪ್ರಕಾರ ಸದರಿ ಕಟ್ಟಡವನ್ನು ನಗರಸಭೆ ವಶಕ್ಕೆ ತೆಗೆದುಕೊಳ್ಳದಿರುವ ಬಗ್ಗೆ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.
10. ಡಾ|| ರಫೀಕ್ ಅಹ್ಮದ್ ಅವರು ತುಮಕೂರು ನಗರದ ಜಯನಗರ ಬಡಾವಣೆಯಲ್ಲಿ ಹೊಸ ಪೋಲೀಸ್ ಠಾಣೆಯನ್ನು ಸ್ಥಾಪಿಸುವ ಬಗ್ಗೆ ಗೃಹ ಸಚಿವರ ಗಮನ ಸೆಳೆಯುವುದು.
11. ಶ್ರೀ ರಾಮಕೃಷ್ಣ ಶಿ ದೊಡ್ಡಮನಿ ಅವರು ಶಿರಹಟ್ಟಿ ಕ್ಷೇತ್ರದ ಹಮ್ಮಿಗಿ ಗ್ರಾಮದ 61 ಬಡಕುಟುಂಬಗಳಿಗೆ ಆಹಾರ ಪಡಿತರ ಚೀಟಿಗಳು ರದ್ದಾಗಿದ್ದು ಈವರೆಗೂ ಆಹಾರ ಪಡಿತರ ಚೀಟಿ ವಿತರಣೆಯಾಗದಿರುವ ಬಗ್ಗೆ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರ ಗಮನ ಸೆಳೆಯುವುದು.
12. ಶ್ರೀ ಬಿ.ಬಿ. ಚಿಮ್ಮನಕಟ್ಟಿ ಅವರು ಸವದತ್ತಿಯಿಂದ ರಾಮದುರ್ಗ, ಕಾಕನೂರು ಮತ್ತು ಕುಳಗೇರಿ ಕ್ರಾಸ್ ಮಾರ್ಗವಾಗಿ ಪಟ್ಟದಕಲ್ಲು ವರೆಗಿನ ರಸ್ತೆಯನ್ನು ಕೆಶಿಪ್-2 ಯೋಜನೆಯಡಿಯಲ್ಲಿ ಟೆಂಡರ್ ಮೂಲಕ 2012ರಲ್ಲಿ ಕೈಗೊಂಡ ಕಾಮಗಾರಿಯು ಇದುವರೆವಿಗೂ ಪೂರ್ಣಗೊಳಸದಿರುವ ಬಗ್ಗೆ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.
13. ಶ್ರೀ ಬಿ.ವೈ. ರಾಘವೇಂದ್ರ ಅವರು ರಾಜ್ಯದಲ್ಲಿ ಬಿ.ಪಿ.ಎಲ್. ಎ.ಪಿ.ಎಲ್ ಹಾಗೂ ಅಂತ್ಯೋದಯ ಪಡಿತರ ಚೀಟಿಗೆ ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಯಾಗುತ್ತಿರುವ ಬಗ್ಗೆ ಹಾಗೂ ಅನೇಕ ಬಿ.ಪಿ.ಎಲ್ ಕಾರ್ಡುಗಳನ್ನು ವಜಾಗೊಳಿಸಿರುವ ಬಗ್ಗೆ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರ ಗಮನ ಸೆಳೆಯುವುದು.
14. ಶ್ರೀ ಗುರು ಪಾಟೀಲ್ ಶಿರವಾಳ ಅವರು ಶಹಪುರ ಕ್ಷೇತ್ರದ ಸುರಪುರ ತಾಲ್ಲೂಕಿನ ಏಪೂರ ಗ್ರಾಮದ ಸರ್ವೆ ನಂಬರ 115ರಲ್ಲಿ 193 ಎಕರೆ ಜಮೀನಿನಲ್ಲಿ ಸುಮಾರು ವರ್ಷಗಳಿಂದ ಸಾಗುವಳಿ ಮಾಡುತ್ತಿದ್ದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತ ಪಂಗಡಕ್ಕೆ ಸೇರಿದವರನ್ನು ಅಕ್ರಮವಾಗಿ ಜಮೀನಿನಿಂದ ಹೊರ ಹಾಕುತ್ತಿರುವ ಬಗ್ಗೆ ಅರಣ್ಯ ಸಚಿವರ ಗಮನ ಸೆಳೆಯುವುದು.
15. ಶ್ರೀ ಪಿ.ರಾಜೀವ್ ಅವರು ರಾಜ್ಯದ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರಿಗೆ ಬಿ.ಪಿ.ಎಲ್ ಕಾರ್ಡ್ ನೀಡುವ ಬಗ್ಗೆ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರ ಗಮನ ಸೆಳೆಯುವುದು.
16. ಶ್ರೀ ಮಲ್ಲಿಕಾರ್ಜುನ ಎಸ್. ಖೂಬಾ ಅವರು ಬೀದರ್ ಜಿಲ್ಲೆ ಬಸವ ಕಲ್ಯಾಣ ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 9ರ ಸಸ್ತಾಪುರದಿಂದ ಬಸವಕಲ್ಯಾಣ ನಗರಕ್ಕೆ ಸಂಪರ್ಕಿಸುವ ಮುಖ್ಯ ರಸ್ತೆಯಲ್ಲಿ ರಸ್ತೆಗೆ ಹೊಂದಿಕೊಂಡಂತೆ ಅನಧಿಕೃತ ಕಟ್ಟಡಗಳು ನಿರ್ಮಾಣವಾಗುತ್ತಿರುವ ಬಗ್ಗೆ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,

17. ಶ್ರೀ ಅಶೋಕ ಖೇಣಿ ಅವರು ಬೀದರ್ ತಾಲ್ಲೂಕು ಚಟ್ನಹಳ್ಳಿ ಗ್ರಾಮದ ರೈತರುಗಳ ಸುಮಾರು ಒಂದು ಸಾವಿರ ಎಕರೆ ಭೂಮಿಯನ್ನು ಕಾನೂನು ಬಾಹಿರವಾಗಿ ಆರ್.ಟಿ.ಸಿಯ ವಕ್ಫ್ ಮಂಡಳಿಯ ಹೆಸರಿಗೆ ನಮೂದು ಮಾಡಿರುವ ಬಗ್ಗೆ ಕಂದಾಯ ಸಚಿವರ ಗಮನ ಸೆಳೆಯುವುದು.
18. ಶ್ರೀಯುತರುಗಳಾದ ಸಿ.ಎನ್.ಬಾಲಕೃಷ್ಣ, ಹೆಚ್.ಡಿ. ರೇವಣ್ಣ, ಎ.ಬಿ. ರಮೇಶ್ ಬಂಡಿಸಿದ್ದೇಗೌಡ, ಪಿ.ಎಂ. ಸುಧಾಕರಲಾಲ್ ಹಾಗೂ ಇತರರು ರಾಜ್ಯದಲ್ಲಿ ಸರ್ಕಾರಿ ಪಶುವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸುವ ಬಗ್ಗೆ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.
19. ಶ್ರೀ ಕೆ.ಎಂ. ತಿಮ್ಮರಾಯಪ್ಪ ಅವರು ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕಿನಾದ್ಯಂತ ಕಳೆದ ಒಂದು ವಾರದಿಂದ ವಿದ್ಯುತ್ತನ್ನು ಸ್ಥಗಿತಗೊಳಿಸಿದ್ದು ಹಾಗೂ ನಿರಂತರ ಜ್ಯೋತಿ ಯೋಜನೆಯು ಕೂಡಾ ಇಲ್ಲದಿರುವುದರಿಂದ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಇಂಧನ ಸಚಿವರ ಗಮನ ಸೆಳೆಯುವುದು.
20. ಶ್ರೀ ಪ್ರಮೋದ್ ಮಧ್ವರಾಜ್ ಅವರು ಉಡುಪಿ ವಿಧಾನ ಸಭಾ ಕ್ಷೇತ್ರದಲ್ಲಿ ಆಧಾರ ಕಾರ್ಡ ವಿತರಿಸುವ ಕೇಂದ್ರವು ಕೇವಲ ಒಂದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.
21. ಶ್ರೀ ಎ.ಮಂಜು ಅವರು ಸರ್ಕಾರ ಅಥವಾ ಕರ್ನಾಟಕ ಲೋಕಸೇವಾ ಆಯೋಗ ನೇಮಕಾತಿ ಮಾಡಿಕೊಳ್ಳುವ ಸಂದರ್ಭದಲ್ಲಿ ಅರ್ಜಿಯೊಂದಿಗೆ ಅಗತ್ಯ ಮೀಸಲಾತಿ ಪ್ರಮಾಣ ಪತ್ರಗಳನ್ನು ಸಲ್ಲಿಸಿರುವಂತಹ ಅಭ್ಯರ್ಥಿಯು ವ್ಯಕ್ತಿತ್ವ ಪರೀಕ್ಷೆ ಅಥವಾ ದಾಖಲಾತಿ ಪರಿಶೀಲನೆಯ ದಿನಾಂಕದಂದು ಆಕಸ್ಮಿಕ ಅಥವಾ ಅನಿವಾರ್ಯ ಕಾರಣಗಳಿಂದ ಮೀಸಲಾತಿಯ ಮೂಲ ಪ್ರಮಾಣ ಪತ್ರಗಳನ್ನು ಹಾಜರುಪಡಿಸಲು ಸಾಧ್ಯವಾಗದಿದ್ದ ಸಂದರ್ಭದಲ್ಲಿ ಅಂತಹ ಅಭ್ಯರ್ಥಿಗಳಿಗೆ ಮೀಸಲಾತಿಯನ್ನು ನೀಡದೆ ಅನ್ಯಾಯವಾಗುತ್ತಿರುವ ಬಗ್ಗೆ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.
22. ಶ್ರೀ ಗೋವಿಂದ ಎಂ. ಕಾರಜೋಳ ಅವರು ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಒಟ್ಟು 14 ಸದಸ್ಯರನ್ನು ನೇಮಕ ಮಾಡಲು ಅವಕಾಶವಿದ್ದು ಹೈದರಾಬಾದ್-ಕರ್ನಾಟಕದಿಂದ ಒಬ್ಬ ಸದಸ್ಯರನ್ನು ನೇಮಕ ಮಾಡಿಲ್ಲದಿರುವ ಬಗ್ಗೆ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.
23. ಶ್ರೀ ಹೆಚ್.ಸಿ. ಬಾಲಕೃಷ್ಣ ಅವರು ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ನಂದಗುಡಿ ಹೋಬಳಿ ಚೊಕ್ಕಸಂದ್ರ ಗ್ರಾಮದ ಸರ್ವೆ ನಂಬರ 77ರ ಸರ್ಕಾರಿ ಗೋಮಾಳದಲ್ಲಿ ರೈತರಿಗೆ ಜಮೀನು ಮಂಜೂರು ಮಾಡಿದ್ದರೂ ಮೂಲ ದಾಖಲೆಗಳನ್ನು ತಿದ್ದಿ ಮೂಲ ಮಂಜೂರುದಾರರಿಗೆ ಅನ್ಯಾಯವಾಗಿರುವ ಬಗ್ಗೆ ಕಂದಾಯ ಸಚಿವರ ಗಮನ ಸೆಳೆಯುವುದು.
24. ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು ರಾಗಿ ಮತ್ತು ಮೆಕ್ಕೆ ಜೋಳದ ಬೆಲೆ ಕುಸಿದಿದ್ದು ಸರಿಯಾದ ಬೆಂಬಲ ಬೆಲೆಯನ್ನು ಘೋಷಿಸದೆ ರೈತರಿಗೆ ತೊಂದರೆಯಾಗಿರುವ ಬಗ್ಗೆ ಕೃಷಿ ರಾಜ್ಯ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

25. ಶ್ರೀಯುತರುಗಳಾದ ಹೆಚ್.ಎಸ್. ಪ್ರಕಾಶ್, ಹೆಚ್.ಡಿ.ರೇವಣ್ಣ, ಬಿ.ಬಿ.ನಿಂಗಯ್ಯ ಹಾಗೂ ಇತರರು ಹಾಸನ ನಗರ ಸಭೆ ಆಯುಕ್ತರು ಈ ಹಿಂದೆ ದಾಂಡೇಲಿ, ಮಂಡ್ಯ, ಚಿಕ್ಕಮಗಳೂರು ಮತ್ತು ಚಾಮರಾಜನಗರ ನಗರಸಭೆಗಳಲ್ಲಿ ಪೌರಾಯುಕ್ತರಾಗಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ಹಲವಾರು ಅಕ್ರಮ ಮತ್ತು ಕಾನೂನು ಬಾಹಿರ ಭ್ರಷ್ಟಾಚಾರ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಬಗ್ಗೆ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

8. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಹೆಚ್.ಡಿ.ರೇವಣ್ಣ ಅವರು "ನಕಲಿ ದಾಖಲೆಗಳನ್ನು ನೀಡಿರುವ ಗುತ್ತಿಗೆದಾರರ ವಿರುದ್ಧ ಕ್ರಮ" ಬಗ್ಗೆ ದಿನಾಂಕ:09.12.2014ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಒಂದನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 01(158)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಪಿ. ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)